**All India Radio: Bangalore**
**National Bulletin In Kannada**
**30.09.2025  19.35 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**30.09.2025  19.35 p.m.**

**<><><><>**

ಮುಖ್ಯಾಂಶಗಳು

1. ಬಿಹಾರದಲ್ಲಿ ಅಂತಿಮ ಮತದಾರರ ಪಟ್ಟಿ ಬಿಡುಗಡೆ ಮಾಡಿದ ಚುನಾವಣಾ ಆಯೋಗ
2. ಕಬ್ಬು ಕೃಷಿಗೆ ಸಂಬಂಧಿಸಿದ ಸವಾಲು ಎದುರಿಸಲು ಭಾರತೀಯ ಕೃಷಿ ಸಂಶೋಧನಾ ಮಂಡಳಿಯ ಅಡಿಯಲ್ಲಿ ವಿಶೇಷ ತಂಡ ರಚನೆ- ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್
3. ಭಾರತದ ಔಷಧ ರಫ್ತು ಈ ವರ್ಷ ೩೦ ಶತಕೋಟಿ ಡಾಲರ್ ದಾಟುವ ನಿರೀಕ್ಷೆ - ಕೇಂದ್ರ ಸಚಿವ ಜಿತೇಂದ್ರ ಸಿಂಗ್ಐಸಿಸಿ ಮಹಿಳಾ ವಿಶ್ವಕಪ್: ಮೊದಲ ಏಕದಿನ ಪಂದ್ಯದಲ್ಲಿಂದು ಭಾರತ-ಶ್ರೀಲಂಕಾ ಮುಖಾಮುಖಿ

<><><><>

ವಿಧಾನಸಭೆ ಚುನಾವಣೆ ನಡೆಯಲಿರುವ ಬಿಹಾರದಲ್ಲಿ ವಿಶೇಷ ತೀವ್ರ ಪರಿಷ್ಕರಣೆಯ ನಂತರ ಭಾರತ ಚುನಾವಣಾ ಆಯೋಗ ಇಂದು ಅಂತಿಮ ಮತದಾರರ ಪಟ್ಟಿಯನ್ನು ಬಿಡುಗಡೆ ಮಾಡಿದೆ. ಚುನಾವಣಾ ಆಯೋಗದ ಅಧಿಕೃತ ವೆಬ್‌ಸೈಟ್‌ನಲ್ಲಿ ಇದು ಲಭ್ಯವಿದೆ. ಬಿಹಾರದ ಮುಖ್ಯ ಚುನಾವಣಾಧಿಕಾರಿ ಕಚೇರಿಯ ಪ್ರಕಾರ, ಮತದಾರರ ಪಟ್ಟಿಯ ಭೌತಿಕ ಪ್ರತಿಗಳನ್ನು ಎಲ್ಲಾ ಜಿಲ್ಲಾ ಚುನಾವಣಾ ಅಧಿಕಾರಿಗಳು ಆಗಿರುವ ಜಿಲ್ಲಾ ಮ್ಯಾಜಿಸ್ಟ್ರೇಟ್ ಕಚೇರಿಗಳಲ್ಲಿ ಲಭ್ಯವಾಗುವಂತೆ ಮಾಡಲಾಗುತ್ತದೆ.

<><><><>

ದೇಶದಲ್ಲಿ ಕಬ್ಬು ಕೃಷಿಗೆ ಸಂಬಂಧಿಸಿದ ಸವಾಲುಗಳನ್ನು ಎದುರಿಸಲು ಭಾರತೀಯ ಕೃಷಿ ಸಂಶೋಧನಾ ಮಂಡಳಿಯ ಅಡಿಯಲ್ಲಿ ವಿಶೇಷ ತಂಡವನ್ನು ರಚಿಸಲಾಗುವುದು ಎಂದು ಕೇಂದ್ರ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಘೋಷಿಸಿದ್ದಾರೆ. ನವದೆಹಲಿಯಲ್ಲಿಂದು ನಡೆದ ಸುಸ್ಥಿರ ಕಬ್ಬು ಆರ್ಥಿಕತೆಯ ರಾಷ್ಟ್ರೀಯ ಸಮಾವೇಶ ಉದ್ದೇಶಿಸಿ ವರ್ಚುವಲ್ ಮೂಲಕ ಮಾತನಾಡಿದ ಸಚಿವರು, ರೈತರು, ವಿಜ್ಞಾನಿಗಳು ಮತ್ತು ಕೈಗಾರಿಕಾ ಪಾಲುದಾರರಿಂದ ಸಲಹೆಗಳನ್ನು ಪಡೆದ ನಂತರ ಈ ತಂಡ ಕಬ್ಬಿನ ನೀತಿ ಮತ್ತು ಸಂಶೋಧನಾ ನಿರ್ದೇಶನಗಳನ್ನು ರೂಪಿಸುತ್ತದೆ ಎಂದು ತಿಳಿಸಿದರು.

<><><>

ಪ್ರಸ್ತುತ ಸುಮಾರು ೨೭ ಶತಕೋಟಿ ಡಾಲರ್ ಮೌಲ್ಯದ ಭಾರತದ ಔಷಧ ರಫ್ತು ಈ ವರ್ಷ ೩೦ ಶತಕೋಟಿ ಡಾಲರ್ ದಾಟುವ ನಿರೀಕ್ಷೆಯಿದೆ ಎಂದು ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಜಿತೇಂದ್ರ ಸಿಂಗ್ ತಿಳಿಸಿದ್ದಾರೆ. ಜೈವಿಕ ತಂತ್ರಜ್ಞಾನ ಇಲಾಖೆ ಮತ್ತು ಉತ್ತರ ಪ್ರದೇಶ ಸರ್ಕಾರ ತಿಳಿವಳಿಕೆ ಒಪ್ಪಂದಕ್ಕೆ ಸಹಿ ಹಾಕಿದ ಸಂದರ್ಭದಲ್ಲಿ ಮಾತನಾಡಿದ ಸಚಿವರು, ಈ ಒಪ್ಪಂದವು ವಿಕಸಿತ ಭಾರತ ೨೦೪೭ರ ದೃಷ್ಟಿಕೋನವನ್ನು ಮುನ್ನಡೆಸಲು ಹಾಗೂ ಕೈಗೆಟಕುವ ಆರೋಗ್ಯ ರಕ್ಷಣಾ ಪರಿಹಾರಗಳ ಪೂರೈಕೆದಾರರಾಗಿ ಭಾರತದ ಸ್ಥಾನವನ್ನು ಬಲಪಡಿಸಲು ಸಹಾಯ ಮಾಡುತ್ತದೆ ಎಂದರು. ೬೦ ಶತಕೋಟಿ ಡಾಲರ್‌ಗಳ ದೇಶೀಯ ಔಷಧ ಮಾರುಕಟ್ಟೆ ೨೦೩೦ರ ವೇಳೆಗೆ ೧೩೦ ಶತಕೋಟಿ ಡಾಲರ್‌ಗಳಿಗೆ ಏರಿಕೆಯಾಗುವ ನಿರೀಕ್ಷೆಯಿದೆ ಎಂದು ಸಚಿವ ಜಿತೇಂದ್ರ ಸಿಂಗ್ ಹೇಳಿದರು.

<><><>

ಭವಿಷ್ಯದ ಯುದ್ಧಗಳನ್ನು ಗೆಲ್ಲಲು ದೇಶಿಯ ಉತ್ಪಾದನೆ ಮುಂದಿನ ದಾರಿಯಾಗಿದೆ ಎಂದು ಭಾರತೀಯ ವಾಯುಪಡೆ ಉಪ ಮುಖ್ಯಸ್ಥ ಏರ್ ಮಾರ್ಷಲ್ ಅವದೇಶ್

ಕುಮಾರ್ ಬಾರ್ತಿ ಪ್ರತಿಪಾದಿಸಿದ್ದಾರೆ. ನವದೆಹಲಿಯಲ್ಲಿ ಇಂದು ಎಫ್‌ಐಸಿಸಿಐ ಆಯೋಜಿಸಿದ್ದ ಏರೋ ಟೆಕ್ ಇಂಡಿಯಾ-೨೦೨೫ ಉದ್ದೇಶಿಸಿ ಮಾತನಾಡಿದ ಅವರು, ನಿರ್ದಿಷ್ಟ ಸಮಯದೊಳಗೆ ಉತ್ಪಾದನೆಯನ್ನು ಹೆಚ್ಚಿಸಲು ಶೇಕಡ ೧೦೦ರಷ್ಟು ದೇಶೀಕರಣಕ್ಕೆ ಅವರು ಶಿಫಾರಸ್ಸು ಮಾಡಿದರು. ನಾವೀನ್ಯತೆ, ಏಕೀಕರಣ ಮತ್ತು ಸ್ವಾವಲಂಬನೆಯಿಂದ ಯುದ್ಧಗಳನ್ನು ಗೆಲ್ಲಲಾಗುತ್ತದೆ. ಸುರಕ್ಷಿತ ಸಂವಾಹನಕ್ಕಾಗಿ ಕ್ವಾಂಟಮ್ ಕಂಪ್ಯೂಟಿಂಗ್, ಹೈಪರ್‌ಸಾನಿಕ್ ಕ್ಷಿಪಣಿಗಳನ್ನು ಸಕ್ರಿಯಗೊಳಿಸಲು ಸ್ಕ್ಯಾಮ್‌ಜೆಟ್ ಎಂಜಿನ್‌ಗಳು, ಯುದ್ಧ ವಿಮಾನಗಳು ಮತ್ತು ಸಾರಿಗೆ ವಿಮಾನಗಳಿಗೆ ಕೋರ್ ಏರೋ ಎಂಜಿನ್ ತಂತ್ರಜ್ಞಾನಗಳಲ್ಲಿ ಹೂಡಿಕೆ ಮಾಡುವಂತೆ ಅವರು ತಯಾರಕರನ್ನು ಒತ್ತಾಯಿಸಿದರು.

<><><><>

ಆಪರೇಷನ್ ಸಿಂದೂರ ಸಮಯದಲ್ಲಿ ಕಠಿಣ ಕ್ರಮ ಅನುಭವಿಸಿದ ನಂತರವೂ ಪಾಕಿಸ್ತಾನ ಮತ್ತೆ ತನ್ನ ದುಷ್ಕೃತ್ಯಗಳನ್ನು ನಡೆಸಿದರೆ, ಈ ಬಾರಿ ಶಿಕ್ಷೆ ಪ್ರಮಾಣ ದೊಡ್ಡದಾಗಿರುತ್ತದೆ ಎಂದು ಭಾರತೀಯ ಸೇನೆ ಎಚ್ಚರಿಸಿದೆ.

ಪಂಜಾಬ್‌ನ ಟಾರ್ನ್ ತರಣ್‌ನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಪಶ್ಚಿಮ ಕಮಾಂಡ್‌ನ ಸೇನಾ ಕಮಾಂಡರ್ ಲೆಫ್ಟಿನೆಂಟ್ ಜನರಲ್ ಮನೋಜ್ ಕುಮಾರ್ ಕಟ್ಟಿಯಾರ್, ಪಾಕಿಸ್ತಾನ ತನ್ನ ಸ್ವ-ಹಿತಾಸಕ್ತಿಗಳಿಗಾಗಿ ಭಾರತದೊಂದಿಗೆ ಮುಖಾಮುಖಿಯಾಗಲು ಬಯಸುತ್ತದೆ ಎಂದು ಹೇಳಿದರು. ಆಪರೇಷನ್ ಸಿಂದೂರ ಇನ್ನು ಮುಕ್ತಾಯಗೊಂಡಿಲ್ಲ. ಯಾವುದೇ ದುಷ್ಕೃತ್ಯವನ್ನು ಎದುರಿಸಲು ಇನ್ನೂ ಸಿದ್ಧತೆಗಳು ನಡೆಯುತ್ತಿವೆ ಎಂದು ಅವರು ತಿಳಿಸಿದರು.

<><><><>

ನವದೆಹಲಿಯಲ್ಲಿ ನಾಳೆ ನಡೆಯಲಿರುವ ರಕ್ಷಣಾ ಲೆಕ್ಕಪತ್ರ ಇಲಾಖೆಯ ವಾರ್ಷಿಕ ದಿನಾಚರಣೆಯಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಭಾಗವಹಿಸಲಿದ್ದಾರೆ. ಇದೇ

ವೇಳೆ ರಕ್ಷಣಾ ಲೆಕ್ಕಪತ್ರಗಳ ನಿಯಂತ್ರಕ ಜನರಲ್‌ನ ಸಾಂಸ್ಥಿಕ ಸಾಮರ್ಥ್ಯ ಬಲಪಡಿಸುವ ಮತ್ತು ಸೇವಾ ವಿತರಣೆಯನ್ನು ಹೆಚ್ಚಿಸುವ ಗುರಿಯನ್ನು ಹೊಂದಿರುವ ಹೊಸ ಪ್ರಕಟಣೆಗಳ ಸರಣಿಯನ್ನು ರಕ್ಷಣಾ ಸಚಿವರು ಬಿಡುಗಡೆಗೊಳಿಸಲಿದ್ದಾರೆ.

<><><><>

ಸಾರ್ವಜನಿಕ ಸೇವೆ ಮತ್ತು ಉತ್ತಮ ಆಡಳಿತದ ಮಂತ್ರದಿಂದ ಮಾರ್ಗದರ್ಶಿಸಲ್ಪಟ್ಟ ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದ ಸರ್ಕಾರ, ಪರಿವರ್ತನೆ ಮತ್ತು ಪ್ರಗತಿಯನ್ನು ತರಲು ಅವಿಶ್ರಾಂತವಾಗಿ ಶ್ರಮಿಸುತ್ತಿದೆ. ಇಂದು ಈ ವಿಶೇಷ ಸರಣಿ 'ಸೇವಾ ಪರ್ವ'ದಲ್ಲಿ ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ ಅವರ ಐತಿಹಾಸಿಕ ಬಾಹ್ಯಾಕಾಶ ಪ್ರಯಾಣವು ಭಾರತದ ಮಹತ್ವಾಕಾಂಕ್ಷಿಯ ಬಾಹ್ಯಾಕಾಶ ಕಾರ್ಯಕ್ರಮವನ್ನು ಹೇಗೆ ಮುನ್ನಡೆಸುತ್ತಿದೆ ಮತ್ತು ಪರಿಶೋಧನೆಯ ಹೊಸ ಯುಗಕ್ಕೆ ಪ್ರೇರಣೆ ನೀಡುತ್ತಿದೆ ಎಂಬುದರ ಕುರಿತು ವಿಶೇಷ ವರದಿ ಇದೀಗ ಮೂಡಿಬರಲಿದೆ.

**ಧ್ವನಿ : ವಿಶೇಷ ವರದಿ : ಶಿಲ್ಪಾ (೪೫ ಸೆಕೆಂಡ್‌ಗಳು)**

ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ ಮೊದಲ ಭಾರತೀಯ ಗಗನಯಾತ್ರಿಯಾಗಿ ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ ಇತಿಹಾಸ ನಿರ್ಮಿಸಿದಾಗ, ಅವರು ೧೪೦ ಕೋಟಿ ಭಾರತೀಯರ ಕನಸುಗಳನ್ನು ತಮ್ಮೊಂದಿಗೆ ಹೊತ್ತೊಯ್ದರು. ಬಾಹ್ಯಾಕಾಶದಲ್ಲಿದ್ದಾಗ ಶುಕ್ಲಾ ಮತ್ತು ಅವರ ತಂಡ, ಭಾರತೀಯ ಸಂಶೋಧನಾ ಸಂಸ್ಥೆಗಳು ಅಭಿವೃದ್ಧಿಪಡಿಸಿದ ಏಳು ಸೂಕ್ಷ್ಮ ಗುರುತ್ವಾಕರ್ಷಣೆಯ ಪ್ರಯೋಗಗಳನ್ನು ಪೂರ್ಣಗೊಳಿಸಿದ್ದು, ಭವಿಷ್ಯದ ಬಾಹ್ಯಾಕಾಶ ಯಾನ ಮತ್ತು ದೀರ್ಘಾವಧಿಯ ಬಾಹ್ಯಾಕಾಶ ವಾಸಕ್ಕಾಗಿ ನಿರ್ಣಾಯಕ ದತ್ತಾಂಶಗಳನ್ನು ಸಂಗ್ರಹಿಸಲು ಈ ಪ್ರಯೋಗಗಳನ್ನು ವಿನ್ಯಾಸಗೊಳಿಸಲಾಗಿತ್ತು. ಶುಭಾಂಶು ಶುಕ್ಲಾ ಅವರ ಬಾಹ್ಯಾಕಾಶ ಯಾನವು ಮಾನವ ಬಾಹ್ಯಾಕಾಶ ಹಾರಾಟ, ಭಾರತೀಯ ಬಾಹ್ಯಾಕಾಶ ನಿಲ್ದಾಣವನ್ನು

ಮತ್ತು ಚಂದ್ರನ ಮೇಲೆ ಭಾರತೀಯನನ್ನು ಕಳುಹಿಸುವ ಭಾರತದ ಭವಿಷ್ಯದ ಕಾರ್ಯಾಚರಣೆಗಳಿಗೆ ದಾರಿ ಮಾಡಿಕೊಡುತ್ತದೆ. ಈ ಯಾನವು ಭಾರತದ ಮಹತ್ವಾಕಾಂಕ್ಷಿಯ ಬಾಹ್ಯಾಕಾಶ ಕಾರ್ಯಸೂಚಿಯಲ್ಲಿ ಒಂದು ಮೈಲುಗಲ್ಲಾಗಿ ಗುರುತಿಸಲಾಗಿದೆ.

<><><>

ದೂರಸಂಪರ್ಕ ಇಲಾಖೆಯ 'ಸಂಚಾರ್ ಸಾಥಿ' ಉಪಕ್ರಮವು ೭ ಲಕ್ಷಕ್ಕೂ ಹೆಚ್ಚು ಕಳುವಾದ ಮೊಬೈಲ್ ಹ್ಯಾಂಡ್‌ಸೆಟ್‌ಗಳನ್ನು ಮಾಲೀಕರಿಗೆ ಮರಳಿಸುವ ನಿಟ್ಟಿನಲ್ಲಿ ಅನುಕೂಲವಾಗುವ ಮೂಲಕ ಮಹತ್ವದ ಮೈಲುಗಲ್ಲು ಸಾಧಿಸಿದೆ. ಡಿಜಿಟಲ್ ಸುರಕ್ಷತೆಯನ್ನು ಖಚಿಪಡಿಸಿಕೊಳ್ಳಲು ಕಳುವಾದ ಮೊಬೈಲ್ ಹ್ಯಾಂಡ್‌ಸೆಟ್‌ಗಳನ್ನು ಸಂಚಾರ್ ಸಾಥಿ ಪೋರ್ಟಲ್ ಮತ್ತು ಮೊಬೈಲ್ ಅಪ್ಲಿಕೇಷನ್‌ನಲ್ಲಿ ವರದಿ ಮಾಡುವಂತೆ ದೂರಸಂಪರ್ಕ ಸಚಿವಾಲಯವು ನಾಗರಿಕರಿಗೆ ಮನವಿ ಮಾಡಿದೆ.

<><><>

ಭಾರತದ ಸಾಂಸ್ಕೃತಿಕ ಹಕ್ಕುಗಳ ಬದ್ಧತೆ ಮತ್ತು ಸಮಾನ ಬೆಳವಣಿಗೆಗಾಗಿ ಸೃಜನಶೀಲತೆಯನ್ನು ಬಲಪಡಿಸುವ ಅಗತ್ಯವಿದೆ ಎಂದು ಕೇಂದ್ರ ಸಂಸ್ಕೃತಿ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಪ್ರತಿಪಾದಿಸಿದ್ದಾರೆ. ಸ್ಪೇನ್‌ನಲ್ಲಿ ನಡೆದ ಸಾಂಸ್ಕೃತಿಕ ನೀತಿಗಳು ಮತ್ತು ಸುಸ್ಥಿರ ಅಭಿವೃದ್ಧಿ ಕುರಿತ ವಿಶ್ವ ಸಮ್ಮೇಳನದಲ್ಲಿ ಏಷ್ಯಾ ಫೆಸಿಫಿಕ್ ಅಧ್ಯಕ್ಷರಾಗಿ ಅವರು ಮಾತನಾಡಿದರು. ಸಮ್ಮೇಳನದ ನೇಪಥ್ಯದಲ್ಲಿ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಅವರು, ಸ್ಪೇನ್ ಇರಾನ್, ನಾರ್ವೆ, ಕೊಲಂಬಿಯಾ ಮತ್ತು ಗ್ರೀಸ್‌ನ ಸಂಸ್ಕೃತಿ ಸಚಿವರೊಂದಿಗೆ ದ್ವಿಪಕ್ಷೀಯ ಸಭೆಗಳನ್ನು ನಡೆಸಿದರು.

<><><>

ಗುವಾಹಟಿಯ ಬರ್ಸಾಪುರ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಐಸಿಸಿ ಮಹಿಳಾ ವಿಶ್ವಕಪ್ ೨೦೨೫ ಪಂದ್ಯಾವಳಿಯ ಮೊದಲ ಏಕದಿನ ಪಂದ್ಯದಲ್ಲಿ ಭಾರತ

ಮತ್ತು ಶ್ರೀಲಂಕಾ ವನಿತಾ ತಂಡಗಳು ಮುಖಾಮುಖಿಯಾಗಿವೆ. ಮಳೆಯ ಕಾರಣ ಪಂದ್ಯವನ್ನು ೪೭ ಓವರ್‌ಗಳಿಗೆ ಸೀಮಿತಗೊಳಿಸಲಾಗಿದೆ. ಮೊದಲ ಬ್ಯಾಟಿಂಗ್ ಮಾಡುತ್ತಿರುವ ಭಾರತ ವನಿತಾ ಇತ್ತೀಚಿನ ವರದಿ ಬಂದಾಗ, ೪೫ ಓವರ್‌ಗಳಲ್ಲಿ ೭ ವಿಕಟ್ ನಷ್ಟಕ್ಕೆ ೨೩೫ ರನ್ ಮಾಡಿ ಆಡುತ್ತಿದೆ.

<><><><>

ಪಾಕಿಸ್ತಾನದ ಕ್ವೆಟ್ಟಾದಲ್ಲಿರುವ ಪಾಕಿಸ್ತಾನ ಪ್ಯಾರಾ ಮಿಲಿಟರಿ ಫ್ರಾಂಟಿಯರ್ ಕಾರ್ಪ್ಸ್‌ನ ಪ್ರಧಾನ ಕಚೇರಿಯ ಹೊರಗೆ ಇಂದು ಸಂಭವಿಸಿದ ಪ್ರಬಲ ಕಾರ್ ಬಾಂಬ್ ಸ್ಫೋಟದಲ್ಲಿ ಕನಿಷ್ಠ ೧೦ ಜನರು ಮೃತಪಟ್ಟಿದ್ದು, ೩೦ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ. ಬಾಂಬ್ ಸ್ಫೋಟದಲ್ಲಿ ಇಬ್ಬರು ಭದ್ರತಾ ಸಿಬ್ಬಂದಿ ಸಾವನ್ನಪ್ಪಿದ್ದು, ಉಳಿದವರು ನಾಗರಿಕರಾಗಿದ್ದಾರೆ ಎಂದು ಬಲುಚಿಸ್ತಾನದ ಆರೋಗ್ಯ ಸಚಿವ ಮೊಹಮ್ಮದ್ ಕಾಕರ್ ತಿಳಿಸಿದ್ದಾರೆ. ಇದಕ್ಕೆ ಪ್ರತಿಯಾಗಿ ಭದ್ರತಾ ಪಡೆಗಳು ನಡೆಸಿದ ಕಾರ್ಯಾಚರಣೆಯಲ್ಲಿ ೬ ಭಯೋತ್ಪಾದಕರು ಹತರಾಗಿದ್ದಾರೆ. ಗಾಯಾಳುಗಳನ್ನು ಸ್ಥಳೀಯ ಆಸ್ಪತ್ರೆಗಳಿಗೆ ದಾಖಲಿಸಲಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು

<><>